ಕರ್ನಾಟಕ ಸರ್ಕಾರ
(ಕೃಷಿ ಇಲಾಖೆ)

ಸಂ:ಸಿ-2/ಆಡಳಿತ/LAQ-819/2024-25

ಕೃಷಿ ಆಯುಕ್ತರ ಕಾರ್ಯಾಲಯ,
ಶೇಷಾದ್ರಿ ರಸ್ತೆ, ಬೆಂಗಳೂರು
ದಿನಾಂಕ:19.07.2024

ಇವರಿಗೆ,

ಸರ್ಕಾರದ ಕಾರ್ಯದರ್ಶಿಗಳು,

ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ

ಬೆಂಗಳೂರು- 01

ಮಾನ್ಯರೆ,

ವಿಷಯ: ಮಾನ್ಯ ವಿಧಾನಸಭೆ ಸದಸ್ಯರಾದ ಡಾ|| ಹೆಚ್.ಡಿ. ರಂಗನಾಥ್ (ಕುಣಿಗಲ್) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:819ಕ್ಕೆ ಉತ್ತರವನ್ನು ಸಲ್ಲಿಸುವ ಬಗ್ಗೆ.

*****

ಮಾನ್ಯ ವಿಧಾನಸಭೆ ಸದಸ್ಯರಾದ ಡಾ|| ಹೆಚ್.ಡಿ. ರಂಗನಾಥ್ (ಕುಣಿಗಲ್) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:819ಕ್ಕೆ ಉತ್ತರವನ್ನು ಸಿದ್ಧಪಡಿಸಿ ಈ ಪತ್ರದೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

ತಮ್ಮ ವಿಶ್ವಾಸಿ,

ಕೃಷಿ ನಿರ್ದೇಶಕರು

ಕರ್ನಾಟಕ ವಿಧಾನಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 819
2. ಸದಸ್ಯರ ಹೆಸರು: ಡಾ|| ಹೆಚ್.ಡಿ. ರಂಗನಾಥ್ (ಕುಣಿಗಲ್)
3. ವಿಷಯ: ಅಧಿಕಾರಿ/ ಸಿಬ್ಬಂದಿಗಳ ಭರ್ತಿ.
4. ಉತ್ತರಿಸಬೇಕಾದ ದಿನಾಂಕ: 24.07.2024.
5. ಉತ್ತರಿಸಬೇಕಾದವರು: ಮಾನ್ಯ ಕೃಷಿ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ	ಕುಣಿಗಲ್ ವಿಧಾನಸಭಾ ಕ್ಷೇತ್ರದಲ್ಲಿ ಕೃಷಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕುಣಿಗಲ್ ವಿಧಾನಸಭಾ ಕ್ಷೇತ್ರದಲ್ಲಿ ಕೃಷಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.
ಆ	ಸಿಬ್ಬಂದಿಗಳ ಕೊರತೆಯಿಂದ ರೈತರುಗಳಿಗೆ ಅನಾನುಕೂಲವಾಗುತ್ತಿರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)	ಖಾಲಿ ಇರುವ ಹುದ್ದೆಗಳಿಗೆ ಹಾಲಿ ಕಾರ್ಯನಿರ್ವಹಿಸುತ್ತಿರುವ ಲಭ್ಯವಿರುವ ಸಿಬ್ಬಂದಿಗಳನ್ನು ಅವರ ಕರ್ತವ್ಯಗಳ ಜೊತೆಗೆ ಹೆಚ್ಚುವರಿ ಪ್ರಭಾರದಲ್ಲಿರಿಸಲಾಗಿದೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ರಾಷ್ಟ್ರೀಯ ಆಹಾರ ಭದ್ರತಾ ಯೋಜನೆಯಡಿಯಲ್ಲಿ ಸಹಾಯಕ ತಾಂತ್ರಿಕರ ಸೇವೆಯನ್ನು ಹಾಗೂ ಆತ್ಮ ಯೋಜನೆಯಡಿಯಲ್ಲಿ ಉಪಯೋಜನಾ ನಿರ್ದೇಶಕರು, ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರು ಮತ್ತು ಸಹಾಯಕ ತಾಂತ್ರಿಕ ವ್ಯವಸ್ಥಾಪಕರ ಸೇವೆಯನ್ನು ಪಡೆಯಲಾಗಿರುತ್ತದೆ. ಪ್ರತಿ ರೈತ ಸಂಪರ್ಕ ಕೇಂದ್ರಕ್ಕೆ ಒಬ್ಬರಂತೆ ದಾಸ್ತಾನು ನಿರ್ವಹಣಾ ಸಿಬ್ಬಂದಿಗಳ ಸೇವೆಯನ್ನು ಹಾಗೂ ಖಾಲಿ ಇರುವ ಹುದ್ದೆಗಳಿಗನುಗುಣವಾಗಿ ಬೆರಳಚ್ಚುಗಾರರು, ವಾಹನ ಚಾಲಕರು, ಗ್ರೂಪ್ ಡಿ ಇವರುಗಳ ಸೇವೆಯನ್ನು ಸಹ ಬಳಸಿಕೊಂಡು ಸಕಾಲದಲ್ಲಿ ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.
ಇ	ಕೊರತೆ ಇರುವ ಅಧಿಕಾರಿ ಸಿಬ್ಬಂದಿಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು?	i) ಸರ್ಕಾರದ ಪತ್ರ ಸಂಖ್ಯೆ: AGRI/245/AGS/2024, ದಿನಾಂಕ 06.02.2024ರಲ್ಲಿ ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ ವೃಂದದಲ್ಲಿ ಕೆಳಕಂಡಂತೆ ನೇರ ನೇಮಕಾತಿ ಕೋಟಾದಡಿ ಖಾಲಿ ಹುದ್ದೆಗಳನ್ನು

<table>
<tr>
<td></td>
<td></td>
<td>
ಭರ್ತಿಮಾಡಲು ಅನುಮತಿ ನೀಡಲಾಗಿದ್ದು, ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.
<table>
<tr><th>ವೃಂದಗಳು</th><th>ಹುದ್ದೆಗಳ ಸಂಖ್ಯೆ</th></tr>
<tr><td>ಕೃಷಿ ಅಧಿಕಾರಿ</td><td>100</td></tr>
<tr><td>ಸಹಾಯಕ ಕೃಷಿ ಅಧಿಕಾರಿ</td><td>650</td></tr>
<tr><td>ಒಟ್ಟು</td><td>750</td></tr>
</table>
iii) ಪ್ರಥಮ ದರ್ಜೆ ಸಹಾಯಕರ ಹುದ್ದೆಯಲ್ಲಿ ಉಳಿಕೆ ಮೂಲ ವೃಂದದಡಿ- 42 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮವಹಿಸಲಾಗಿದೆ, ದ್ವಿತೀಯ ದರ್ಜೆ ಸಹಾಯಕರ ಹುದ್ದೆಯಲ್ಲಿ ಉಳಿಕೆ ವೃಂದದಡಿ 53 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಹಾಗೂ ಮುಂಬಡ್ತಿ ಕೋಟಾದಡಿ ಖಾಲಿ ಇರುವ ಎಲ್ಲಾ ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.
</td>
</tr>
</table>

ಕೃಷಿ ನಿರ್ದೇಶಕರು